**ವಿಧಾನಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಎನ್.ರವಿಕುಮಾರ್‌ರವರು ನಿಯಮ-72 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಸಚಿವರ ಹೇಳಿಕೆ.**

**ಸೂಚನೆ:-** ಬೆಂಗಳೂರಿನ ಕಾವಲ್ ಬೈರಸಂದ್ರುದಲ್ಲಿರುವ ಮುಸ್ಲಿಂ ಸಮುದಾಯದ ಅನಾಥಶ್ರಮದ (ಎನ್.ಸಿ.ಪಿ.ಸಿ.ಆರ್) ಇರುವುದು ಸರಿಯಷ್ಟೇ. ಸದರಿ ಅನಾಥಶ್ರಮದಲ್ಲಿ ಸುಮಾರು 200 ಅನಾಥ ಮಕ್ಕಳು ವಾಸ್ತವ್ಯವಿದ್ದು, ಶಾಲೆಗೆ ಕಳುಹಿಸದೆ ಇಸ್ಲಾಮಿಕ್ ಶಿಕ್ಷಣ ನೀಡಲಾಗುತ್ತಿದ್ದು, ಅನಾಥಾಶ್ರಮದಲ್ಲಿರುವ ಮಕ್ಕಳು ತಾಲಿಬಾನ್ ಮಾದರಿಯಲ್ಲಿ ಬದುಕುವಂತಾಗಿದೆ. ಮಕ್ಕಳಿಗೆ ಕನಿಷ್ಠ ಮೂಲ ಸೌಕರ್ಯಗಳನ್ನು ಕಲ್ಪಿಸದೆ, ಕೈದಿಗಳಂತೆ ಕೂಡಿ ಹಾಕಲಾಗಿರುವುದು ಗಮನಕ್ಕೆ ಬಂದಿರುತ್ತದೆ. ಇದು ಹೀಗೆ ಮುಂದುವರೆದಲ್ಲಿ, ಮಕ್ಕಳ ಮುಂದಿನ ಭವಿಷ್ಯಕ್ಕೆ ದೊಡ್ಡ ಕಂಟಕ ಎದುರಾಗುವುದಲ್ಲಿ ಯಾವುದೇ ಅನುಮಾನವಿಲ್ಲ. ಒಂದು ವೇಳೆ ಸದರಿ ಅನಾಥಶ್ರಮ ನಡೆಸುವುದಕ್ಕೆ ಆರ್ಥಿಕ ತೊಂದರೆ ಇದ್ದಲ್ಲಿ, ಸರ್ಕಾರವೇ ಈ ಮಕ್ಕಳ ಜವಾಬ್ದಾರಿ ಹೊತ್ತು, ಮಕ್ಕಳಿಗೆ ಉತ್ತಮ ಶಿಕ್ಷಣ ಒದಗಿಸುವ ಸಂಬಂಧ ಅಗತ್ಯ ಕ್ರಮ ಕೈಗೊಳ್ಳುವುದು ಸೂಕ್ತವೆನಿಸುತ್ತದೆ.

**ಉತ್ತರ**

ಬೆಂಗಳೂರು ನಗರದ ಕಾವಲ್ ಬೈರಸಂದ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ದಾರುಲ್ ಉಲೂಂ ಸೈಯಿದಿಯ ಯತೀಂಖಾನ ಮುಸ್ಲಿಂ ಅನಾಥಾಶ್ರಮಕ್ಕೆ ದಿನಾಂಕ: 19-11-2023ರಂದು ಅಧ್ಯಕ್ಷರು, ರಾಷ್ಟ್ರೀಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ (ಎನ್.ಸಿ.ಪಿ.ಸಿ.ಆರ್) ನವದೆಹಲಿ, ಇವರು ಭೇಟಿ ನೀಡಿ, ಸಂಸ್ಥೆಯ ವಿರುದ್ಧ ಬಾಲನ್ಯಾಯ ಮಕ್ಕಳ ಪಾಲನೆ ಮತ್ತು ರಕ್ಷಣೆ ಕಾಯ್ದೆ 2015 ತಿದ್ದುಪಡಿ 2021 ಮತ್ತು ಮಾದರಿ ನಿಯಮಗಳು 2016 ತಿದ್ದುಪಡಿ ಮಾದರಿ ನಿಯಮಗಳು ಸೆಕ್ಷನ್ 34, 41, 42, 75 ಅಡಿಯಲ್ಲಿ ಕೆಲವು ಆಕ್ಷೇಪಗಳನ್ನು ವ್ಯಕ್ತಪಡಿಸಿರುತ್ತಾರೆ. ಇದರಂತೆ ಮಾನ್ಯ ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು ಮಕ್ಕಳ ರಕ್ಷಣಾ ಘಟಕ, ಬೆಂಗಳೂರು ಇವರು ಸಂಸ್ಥೆಗೆ ನೋಟೀಸನ್ನು ಜಾರಿ ಮಾಡಿರುತ್ತಾರೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ, ಮಾನ್ಯ ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಇವರು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಅಧ್ಯಕ್ಷರು, ಮಕ್ಕಳ ಕಲ್ಯಾಣ ಸಮಿತಿ, ಬೆಂಗಳೂರು ನಗರ ಜಿಲ್ಲೆ, ಉಪ ಪೊಲೀಸ್ ಆಯುಕ್ತರು (ಅಪರಾಧ-2), ಉಪ ನಿರ್ದೇಶಕರು ಶಾಲಾ ಶಿಕ್ಷಣ ಇಲಾಖೆ ಇವರನ್ನೊಳಗೊಂಡಂತೆ ವಿಶೇಷ ಕಾರ್ಯಪಡೆಯನ್ನು ರಚಿಸಿ ಸದರಿ ಸಂಸ್ಥೆಗೆ ಭೇಟಿ ನೀಡಿ ಪರಿಶೀಲಿಸಿ ನಿಯಮಾನುಸಾರ ಕ್ರಮ ಕೈಗೊಂಡು ವರದಿ ಸಲ್ಲಿಸಲು ಸೂಚಿಸಿರುತ್ತಾರೆ.

ವಿಶೇಷ ಕಾರ್ಯಪಡೆಯು ದಿನಾಂಕ:05-12-2023 ರಂದು ಸದರಿ ಸಂಸ್ಥೆಗೆ ಭೇಟಿ ನೀಡಿ ಪರಿಶೀಲಿಸಿದ್ದು, ಸಂಸ್ಥೆಯು 200 ಮಕ್ಕಳಿಗೆ ವಾಸ್ತವ್ಯ ಕಲ್ಪಿಸಿರುತ್ತಾರೆ. ಆದರೆ ಸಂಸ್ಥೆಯು ಸರಿಯಾದ ಮೂಲಭೂತ ಸೌಕರ್ಯಗಳನ್ನು ಹೊಂದಿಲ್ಲದಿರುವುದು, ಔಪಚಾರಿಕ ಶಿಕ್ಷಣವನ್ನು ಒದಗಿಸುತ್ತಿಲ್ಲದಿರುವುದು ಹಾಗೂ ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ-2015 ರಡಿ ನೋಂದಣಿಯಾಗಿಲ್ಲದಿರುವುದು ಪರಿಶೀಲನೆ ವೇಳೆ ತಿಳಿದು ಬಂದ ಕಾರಣ ನಿಯಮಾನುಸಾರ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಬೆಂಗಳೂರು ಪೂರ್ವ ಇವರು ಕಾನೂನು ಕ್ರಮಕ್ಕಾಗಿ ದೇವರ ಜೀವನಹಳ್ಳಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದು, ಬಾಲನ್ಯಾಯ ಕಾಯ್ದೆ-2015ರ ಸೆಕ್ಷನ್ 34, 41(1), 42, 75ರಡಿ ಎಫ್.ಐ.ಆರ್ (0339/2023) ದಾಖಲಿಸಲಾಗಿರುತ್ತದೆ.

ಮುಂದುವರೆದು ಸಂಸ್ಥೆಯಲ್ಲಿ ವಾಸ್ತವ್ಯ ಪಡೆದಿರುವ ಎಲ್ಲಾ ಮಕ್ಕಳನ್ನು ಮಕ್ಕಳ ಕಲ್ಯಾಣ ಸಮಿತಿ-1 ಬೆಂಗಳೂರು ನಗರ ಇದರ ಮುಂದೆ ಹಾಜರುಪಡಿಸಿದ್ದು, ಸಮಿತಿಯು ನೀಡುವ ಆದೇಶದನ್ವಯ ಮಕ್ಕಳ ಪುನರ್ವಸತಿ ಕ್ರಮ ಕೈಗೊಳ್ಳಲಾಗುತ್ತದೆ.

ಸಂಖ್ಯೆ: ಮಮಇ 133 ಮಭಾಬ 2023

**(ಲಕ್ಷ್ಮೀ ಆರ್. ಹೆಬ್ಬಾಳ್ಕರ್)**
ಮಹಿಳಾ ಮತ್ತುಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಹಾಗೂ ಹಿರಿಯ ನಾಗರೀಕರ
ಸಬಲೀಕರಣ ಸಚಿವರು.